ಈಗ ಬಿಲ್‌ನ್ನು ಮಂಡಿಸಿ ಬಿಡುತ್ತೇನೆ. ಆಗ ನಾನು ಬೇರೆ ಯಾವುದೋ ಸಭೆಯಲ್ಲಿದ್ದೆ. ಬಹಳ ಸಣ್ಣ ಸಣ್ಣದು.

ಉಪಾಧ್ಯಕ್ಷರು : ಉನ್ನತ ಶಿಕ್ಷಣ ಸಚಿವರು ತಾವು ತಮ್ಮ ವಿಧೇಯಕ ಮಂಡಿಸಿ.

(ಈ) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕ, 1999

ಶ್ರೀ ಬಿ.ಎ. ಮೊಯ್ದೀನ್ (ಉನ್ನತ ಶಿಕ್ಷಣ ಸಚಿವರು) : ಮಾನ್ಯ ಉಪಾಧ್ಯಕ್ಷರೆ, 1998 ರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವ ಮಂಡಿಸಲ್ಪಟ್ಟಿತು

ಶ್ರೀ ಬಿ. ಎ. ಮೊಯ್ದೀನ್ (ಉನ್ನತ ಶಿಕ್ಷಣ ಸಚಿವರು) : ಮಾನ್ಯ ಉಪಾಧ್ಯಕ್ಷರೆ, ಈವೊಂದು ತಿದ್ದುಪಡಿಯನ್ನು ಏಳು ಜಿಲ್ಲೆಗಳು ಹೊಸದಾಗಿ ಬಂದಿದ್ದರಿಂದ ಈ ಯೂನಿವರ್ಸಿಟಿಯೊಳಗೆ ಈ ಜಿಲ್ಲೆಗಳನ್ನು ತರಬೇಕೆನ್ನುವ ಉದ್ದೇಶದಿಂದ ಇವನ್ನು ತಂದಿದ್ದೇವೆ. ದಯವಿಟ್ಟು ಇದನ್ನು ಪಾಸ್ ಮಾಡಿಕೊಡಬೇಕೆಂದು ಕೇಳಿ ಕೊಳ್ಳುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ :-

"1998 ರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2

ಉಪಾಧ್ಯಕ್ಷರು : ಖಂಡ 2 ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ

"ಮೊದಲನೆಯ ಖಂಡ, ಧೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ಧೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು).

ಪ್ರಸ್ತಾವದ ಅಂಗೀಕಾರ.

ಶ್ರೀ ಬಿ.ಎ. ಮೊಯ್ದೀನ್ (ಉನ್ನತ ಶಿಕ್ಷಣ ಸಚಿವರು) : ಮಾನ್ಯ ಉಪಾಧ್ಯಕ್ಷರೆ "1998 ರ

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ : " 1998 ರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಉ) ಕರ್ನಾಟಕ ಸ್ಟ್ಯಾಂಪು (ತಿದ್ದುಪಡಿ) ವಿಧೇಯಕ, 1999

ಶ್ರೀ ಬಿ. ಸೋಮಶೇಖರ್ (ಕಂದಾಯ ಸಚಿವರು) : ಮಾನ್ಯ ಉಪಾಧ್ಯಕ್ಷರೆ, " ಕರ್ನಾಟಕ ಸ್ಟ್ಯಾಂಪು (ತಿದ್ದುಪಡಿ) ವಿಧೇಯಕ 1999ನ್ನು ಪರ್ಯಾಲೋಚಿಸಬೇಕೆಂದು ಸೂಚಿಸುತ್ತೇನೆ."

ಪ್ರಸ್ತಾಪ ಮಂಡಿಸಲ್ಪಟ್ಟಿತು.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ

"ಕರ್ನಾಟಕ ಸ್ಟ್ಯಾಂಪು (ತಿದ್ದುಪಡಿ) ವಿಧೇಯಕ 1999ನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಶ್ರೀ ಮಲ್ಲಿಕಾರ್ಜುನ ಖರ್ಗೆ (ವಿರೋಧ ಪಕ್ಷದ ನಾಯಕರು) : ಮಾನ್ಯ ಉಪಾಧ್ಯಕ್ಷರೆ, ಯಾರಿಗೆ ಪಾಸ್ ಆಗಬೇಕು ಅವರೇ ಯೆಸ್ ಅನ್ನುವುದಿಲ್ಲ.

ಖಂಡ 2 ರಿಂದ 20 ರವರೆಗೆ

ಉಪಾಧ್ಯಕ್ಷರು : ಖಂಡ, 2 ರಿಂದ 20 ರವರೆಗೆ, ಎರಡೂ ಸೇರಿದಂತೆ, ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಹಾಗೂ

ಖಂಡ2 ರಿಂದ20 ರವರೆಗೆ ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು.

ಖಂಡ 1 ಇತ್ಯಾದಿ

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ

'ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಿ. ಸೋಮಶೇಖರ್ (ಕಂದಾಯ ಸಚಿವರು) : ಮಾನ್ಯ ಉಪಾಧ್ಯಕ್ಷರೇ '1999ನೇ ಸಾಲಿನ ಕರ್ನಾಟಕ ಸ್ಟ್ಯಾಂಪು (ತಿದ್ದುಪಡಿ) ವಿಧೇಯವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.